ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಎಸ್.ಸಿ.ಪಿ/ಟಿ.ಎಸ್.ಪಿ., ಯ ಕಾಮಗಾರಿಗಳ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

106 (101) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ. ಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಬಿಡುಗಡೆಯಾದ ಹಣವು ಸರಿಯಾದ ರೀತಿಯಲ್ಲಿ ಬಳಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಿಡುಗಡೆಯಾದ ಹಣದಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಸಂಪೂರ್ಣ ವಿವರ ನೀಡುವುದು) ಹಾಗೂ ಕಾಮಗಾರಿಗಳು ಯಾವ ಯಾವ ಹಂತದಲ್ಲಿದೆ ; ಮತ್ತು ಮುಕ್ತಾಯವಾಗಿರುವ ಕಾಮಗಾರಿಗಳ ವಿವರಗಳನ್ನು ಸಂಪೂರ್ಣವಾಗಿ ನೀಡುವುದು ;

(ಈ) ಎಸ್.ಸಿ.ಪಿ/ಟಿ.ಎಸ್.ಪಿ.ಗೆ ಅನುದಾನ ಬಿಡುಗಡೆಗೊಂಡು ಇನ್ನು ಪ್ರಾರಂಭವಾಗದೇ ಇರುವ ಕಾಮಗಾರಿಗಳ ವಿವರ ಹಾಗೂ ಪ್ರಾರಂಭ ಮಾಡಲು ಇರುವ ಅರ್ಹತೆಗಳೇನು ; ಇವುಗಳನ್ನು ಪ್ರಾರಂಭ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ತಿಳಿಸುವುದು)